# ಕ್ಷೇತ್ರ ಶಿಕ್ಷಣಾಧಿಕಾರಿಯವರ ಕಚೇರಿ, ಸೋಮವಾರಪೇಟೆ ತಾಲೋಕು, ಕೊಡಗು ಜಿಲ್ಲೆ

ಸಂ ಸಿ1. ಹೊ.ಪ್ರಾ.ಶಾ.ನೊಂದಣಿ. 5/2005-2006

ದಿನಾಂಕ 22/03/06

## ನಮೂನೆ -2

## (ನಿಯಮ 30 ರ ಉಪ ನಿಯಮ 5 (ಬಿ))

ವಿಶ್ವ ಮಾನವ ಕುವೆಂಪು ವಿದ್ಯಾ ಸಂಸ್ಥೆ ಒಕ್ಕಲಿಗರ ಸಂಘ (ರಿ) ಸೋಮವಾರಪೇಟೆ ತಾಲೋಕು ಕೊಡಗು ಜಿಲ್ಲೆ ಇವರ ಶಾಲಾ ಆಡಳಿತ ಮಂಡಳಿಯನ್ನು ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995)ಸೆಕ್ಷನ್ 31 ರಂತೆ ಈ ದಿನ , ಇಪ್ಪತ್ತೇಳು ಮೇ ಎರಡು ಸಾವಿರದ ಐದರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಿದೆ'ಎಂದು ಪ್ರಮಾಣಿಕರಿಸಲಾಗಿದೆ.

| | |
|---|---|
| 1.ಕ್ರಮ ಸಂಖ್ಯೆ | 17 |
| 2.ಶಾಲೆಯ ಹೆಸರು ಮತ್ತು ಪೂರ್ಣ ವಿಳಾಸ | ಶ್ರೀ ವಿಶ್ವ ಮಾನವ ಕುವೆಂಪು ವಿದ್ಯಾ ಸಂಸ್ಥೆ<br>ಸೋಮವಾರಪೇಟೆ ತಾಲೋಕು ಕೊಡಗು ಜಿಲ್ಲೆ |
| 3.ಅನುಮತಿ ನೀಡಿದ ತರಗತಿಗಳು | 2006-07, 2007-08, 2008-09, 2009-10, 2010-11,<br>1ನೇತರಗತಿ, 2ನೇತರಗತಿ, 3ನೇತರಗತಿ, 4ನೇತರಗತಿ, 5ನೇತರಗತಿ |
| 4.ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2006-07 |
| 5.ಅನುಮತಿ ನೀಡಿದ ಮಾಧ್ಯಮ | ಕನ್ನಡ ಮಾಧ್ಯಮ |
| 6.ಶುಲ್ಕ ಪಾವತಿ ಮಾಡಿರುವುದು. | ರೂ 5000/- ಪಾವತಿ ಮಾಡಿರುತ್ತಾರೆ |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 17 ಪುಟ ಸಂಖ್ಯೆ 17 ವಾಲ್ಯೂಂ ಸಂಖ್ಯೆ 2 ರಲ್ಲಿ ಈ ಕಛೇರಿಯಲ್ಲಿನ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ.

<u>ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲಾಗಿದೆ.</u>

1.ಈ ನೋಂದಣಿಯು ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995) ರ ನಿಯಮ 3 ರ (4) ಮತ್ತು (5) ಕ್ಕೆ ಒಳಪಟ್ಟಿರುತ್ತದೆ.

2.ಆಡಳಿತ ಮಂಡಳಿಯು ನಿಯಮ 4 (4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು .

3.ಶಾಲಾ ನಿವೇಶನ ,ವಿಸ್ತೀರ್ಣ ,ಕಟ್ಟಡ ,ಪಾಠೋಪಕರಣಗಳು ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನೂಕಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4.ಈ ಶಿಕ್ಷಣ ಸಂಸ್ಥೆಗೆ ಶಾಶ್ವತ ಅನುದಾನರಹಿತ ಕಿರಿಯ ಪ್ರಾಥಮಿಕ ಶಾಲೆಯನ್ನು ತೆರೆಯಲು ನೋಂದಾಯಿಸುವ ವಿಚಾರವನ್ನು ಸರ್ಕಾರಿ ಆದೇಶ ಸಂಖ್ಯೆ ಇಡಿ 14 ಎಸ್‌ಇಎಸ್ 98 ದಿನಾಂಕ 17/3/99 ರನ್ವಯ ಪರಿಶೀಲಿಸಲಾಗಿದೆ.

ಈ ಸಂಸ್ಥೆಯು ಶಾಲೆಯನ್ನು ತೆರೆಯಲು ಉದ್ದೇಶಿಸಿರುವ ಸ್ಥಳದಲ್ಲಿನ 2 .ಕಿ.ಮಿ ವಿಸ್ತೀರ್ಣದೊಳಗಿನ ಪ್ರದೇಶದಲ್ಲಿ ಒಂದು ಸರ್ಕಾರಿ ಪ್ರಾಥಮಿಕ ಶಾಲೆ ಈಗ ಅಸ್ತಿತ್ವದಲ್ಲಿರುತ್ತದೆ. ಹಾಗೂ ಈ ಶಾಲೆಗಳು ಸದರಿ ಪ್ರದೇಶದ ಶೈಕ್ಷಣಿಕ ಅಗತ್ಯತೆಯನ್ನು ಪೂರೈಸುತ್ತಿರುವುದನ್ನು ಮನಗಾಣಲಾಗಿದೆ. ಆದಾಗ್ಯೂ ಹಾಗೂ ಸದರಿ ಶಿಕ್ಷಣ ಸಂಸ್ಥೆಯು ಸ್ವಯಂ ಪ್ರೇರಣೆಯಿಂದ ಸದರಿ ಸ್ಥಳದಲ್ಲಿ ಶಾಶ್ವತ ಅನುದಾನ ರಹಿತ ಖಾಸಗಿ ಶಾಲೆಯನ್ನು ತೆರೆಯಲು ಒಪ್ಪಿರುವುದರಿಂದ 2006-07 ನೇ ಸಾಲಿನಿಂದ ಸದರಿ ಶಾಲೆಯನ್ನು ನೋಂದಾಯಿಸಲಾಗಿದೆ.

5. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನಾಗಲೀ ಅಥವಾ ತರಗತಿಗಳನ್ನಾಗಲೀ ತೆರೆಯತಕ್ಕದ್ದಲ್ಲ.

6.ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶ ಇರುವುದಿಲ್ಲ.

7.ಯಾವ ಆಡಳಿತ ಮಂಡಳಿಗೆ ಶಾಲೆಯನ್ನು ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿ ಮತ್ತು ಅದೇ ಹೆಸರಿನಲ್ಲಿ ಶಾಲೆಯನ್ನು ನಡೆಸತಕ್ಕದ್ದು. ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಿಸತಕ್ಕದ್ದಲ್ಲ.

8. ಸರ್ಕಾರಿ ಆದೇಶ ಸಂಖ್ಯೆ ಇಡಿ 44 ಪಿ.ಜಿ.ಸಿ.2002 ದಿನಾಂಕ 20/05/02 ರಂತೆ ಒಂದರಿಂದ ಐದನೇ ತರಗತಿ ವರೆಗಿನ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ನಡೆಸಿ ಭಾಷ ನೀತಿಯನ್ನು ಪಾಲಿಸತಕ್ಕದ್ದು. ಭಾಷಾ ನೀತಿಯ ಷರತ್ತಿಗೆ ಒಳಪಟ್ಟು ನೋಂದಣಿ ಯಾಗಿರುವ ಶಾಲೆಯಾಗಿರುವುದರಿಂದ ಭಾಷಾ ನೀತಿಯನ್ನು ಉಲ್ಲಂಘಿಸಿದ್ದುದು .ಸರ್ಕಾರದ

Scanned with OKEN Scanner

ಇಲಾಖೆಯ: ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಗಮನಕ್ಕೆ ಬಂದಲ್ಲಿ ನಿಯಮಗಳನ್ನು ಸದರಿ ಶಾಲೆಗೆ ನೀಡಿರುವ ನೋಂದಣಿಯನ್ನು ರದ್ದು ಪಡಿಸಲಾಗುವುದು.

೯.ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡತಕ್ಕದ್ದು.

10ಕರ್ನಾಟಕ ಸಮಗ್ರ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1995)ರ ಅಧಿಯಮ, ಬಿಡುಗಡೆ ಕಾನೂನುಗಳನ್ನು ಹಾಗೂ ನಿಯಮಗಳನ್ನು ಮತ್ತು ಪ್ರಾಧಿಕಾರ ಆಗಿಂದ್ದಾಗ್ಗೆ ಹೊರಡಿಸುವ ಎಲ್ಲಾ ಆದೇಶಗಳನ್ನು ಹಾಗೂ ಸುತ್ತೋಲೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.

11.ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಕೆ 95 ದಿನಾಂಕ 7/9/98 ಮತ್ತು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಕೆ 97 ದಿನಾಂಕ 29/12/98 ರಂತೆ ಈ ನೋಂದಾವಣೆಯು ಮೇರೆಗೆ ತೆರೆಯಲು ಉದ್ದೇಶಿಸಿರುವ ಶಾಲೆಯು ಶಾಶ್ವತ ಅನುದಾನ ರಹಿತ ಶಾಲೆ ಎಂಬುದಾಗಿ ಪರಿಗಣಿಸಲ್ಪಡುತ್ತದೆ.

12.ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದು ಮತ್ತು ಅವುಗಳಿಗೆ ಬದ್ಧರಾಗಿರತಕ್ಕದ್ದು.

13.ಶಾಲೆಯನ್ನು ತೆರೆಯಲು ನೋಂದಣಿ ದೊರೆತ ದಿನಾಂಕದಿಂದ ಅಥವಾ ಶಾಲೆ ಪ್ರಾರಂಭಗೊಂಡ ಒಂದು ತಿಂಗಳ ಒಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿದ 98 ಬೆಂಗಳೂರು 4/11/99 ರಂತೆ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ಪಡೆಯಲು ಸರ್ಕಾರಿ ಆದೇಶ ಇಡಿ 137 ವಿವಿದ 98 ಬೆಂಗಳೂರು 19/5/99 ರ ಪ್ರಕಾರ ಸಕ್ಷಮ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸತಕ್ಕದ್ದು ನಂತರ ಪ್ರತಿ 3 ವರ್ಷಗಳಿಗೊಮ್ಮೆ ಮಾನ್ಯತ ನವೀಕರಿಸಿಕೊಳ್ಳತಕ್ಕದ್ದು.

14.ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತ ವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

15.ತರಬೇತಿ ಹಾಗೂ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ಮಾತ್ರ ಇಲಾಖಾ ನಿಯಮಗಳ ಪ್ರಕಾರ ನೇಮಿಸತಕ್ಕದ್ದು.

16.ಇಲಾಖೆ ಹಾಗೂ ಸರ್ಕಾರ ನಿಗಧಿಪಡಿಸಿದ ಪಠ್ಯ ಪುಸ್ತಕಗಳು.ಹಾಗೂ ಪರೀಕ್ಷಾ ಕ್ರಮಗಳನ್ನು ತಪ್ಪದೆ ಅನುಸರಿಸತಕ್ಕದ್ದು

17.ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಯ ಜಂಟಿ ಖಾತೆಯಲ್ಲಿ ಅಂಚೆ ಕಚೇರಿಯಲ್ಲಿ ಇರಿಸತಕ್ಕದ್ದು

18.ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಗಳ ಪ್ರಕಾರ ಶಾಲೆಗೆ ಅಗತ್ಯವುಳ್ಳ ಕಟ್ಟಡ, ಪೀಠೋಪಕರಣ, ಬೋಧನೋಪಕರಣ, ಗ್ರಂಥಾಲಯ, ಆಟದ ಮೈದಾನ, ಶೌಚಾಲಯ, ನೀರಿನ ವ್ಯವಸ್ಥೆ ಮುಂತಾದ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒಂದು ವರ್ಷದೊಳಗೆ ಒದಗಿಸಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

19.ಶಾಲೆ ತೆರೆದ ಬಗ್ಗೆ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ 2 ತಿಂಗಳೊಳಗಾಗಿ ಈ ಕಛೇರಿಗೆ ತಪ್ಪದೆ ತಿಳಿಸತಕ್ಕದ್ದು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶವು ರದ್ದಾಗುವುದು.

20.ಮೇಲೆ ತಿಳಿಸಲಾದ ಷರತ್ತುಗಳನ್ನು ಉಲ್ಲಂಘಿಸಿ ಶಾಲೆಯನ್ನು ನಡೆಸಿದರೆ ಈ ನೋಂದಣಿಯನ್ನು ಕರ್ನಾಟಕ ಶಿಕ್ಷಣ ಕಾಯ್ದೆಯ ಪ್ರಕಾರ ರದ್ದುಗೊಳಿಸಲಾಗುವುದು. ನಂತರವೂ ಶಿಕ್ಷಣ ಸಂಸ್ಥೆಯನ್ನು ನಡೆಸಿದರೆ 3 ವರ್ಷಗಳವರೆಗೆ ಸಜೆ ಮತ್ತು ರೂ 5000/ ಗಳ ದಂಡದ ನ್ಯಾಯಾಲಯ ಶಿಕ್ಷೆಯು ಅನ್ವಯಿಸುವುದು.

Smatha
(ಎಸ್.ಮಮತ)
ಕ್ಷೇತ್ರ ಶಿಕ್ಷಣಾಧಿಕಾರಿ
ಸೋಮವಾರಪೇಟೆ
ಹಾಗೂ ನೋಂದಣಿ ಅಧಿಕಾರಿ

ಗೆ: ಕರೆಸ್ಪಾಂಡೆಂಟ್ [illegible] ಕುವೆಂಪು ವಿದ್ಯಾ ಸಂಸ್ಥೆ ಒಕ್ಕಲಿಗ ಸಂಘ ಸೋಮವಾರಪೇಟೆ

ಪ್ರತಿಯನ್ನು ವಂದನಾಪೂರ್ವಕವಾಗಿ ಮಾನ್ಯ ಉಪನಿರ್ದೇಶಕರು ಸಾ.ಶಿ.ಇ.ಕೊಡಗು ಜಿಲ್ಲೆ ಮಡಿಕೇರಿ ಇವರಿಗೆ ಸಲ್ಲಿಸಿದೆ.

Scanned with OKEN Scanner

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ : ಸಿ7[9]ಪ್ರಾಶಿಅ: ನೋಂದಣಿ: 22/2011-12 ದಿನಾಂಕ : 02.06.2011

*ನಮೂನೆ-2*

*(ನಿಯಮ 3 ಉಪನಿಯಮ 5 (ಬಿ)*

*ಪ್ರಮಾಣ ಪತ್ರ ಸಂಖ್ಯೆ* 74/2011-12

ವಿಶ್ವಮಾನವ ಕುವೆಂಪು ವಿದ್ಯಾ ಸಂಸ್ಥೆ (ರಿ). ಸೋಮವಾರ ಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ್ 1995) ಸೆಕ್ಷನ್ 31 ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ 44ಪಿಜಿಸಿ 2002, ದಿನಾಂಕ : 11.06.2002 ರ ಪ್ರಕಾರ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ಕ್ರಮ ಸಂಖ್ಯೆ-74 ಪುಟ ಸಂಖ್ಯೆ- 63 ವಾಲ್ಯೂಂ ಸಂಖ್ಯೆ-14 ರಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಿದೆ.

1. ಕ್ರಮ ಸಂಖ್ಯೆ : 74/2011-12
2. ಶಾಲೆಯ ಹೆಸರು ಮತ್ತು ವಿಳಾಸ : ವಿಶ್ವಮಾನವ ಕುವೆಂಪು ಹಿ.ಪ್ರಾ.ಶಾಲೆ, ಸೋಮವಾರ ಪೇಟೆ, ತಾ. ಕೊಡಗು ಜಿಲ್ಲೆ.
3. ಅನುಮತಿ ನೀಡಿದ ತರಗತಿ : 6 ನೇ ತರಗತಿ 7 ನೇ ತರಗತಿ (ಶಾಶ್ವತಅನುದಾನರಹಿತವಾಗಿ)
4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ : 2011-12 , 2012-13 (Permanently without-aid)
5. ಅನುಮತಿ ನೀಡಿದ ಮಾಧ್ಯಮ : ಆಂಗ್ಲ ಮಾಧ್ಯಮ
6. ಶುಲ್ಕ ಪಾವತಿ ಮಾಡಿರುವುದು : ರೂ. 10,000/-

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೋಂದಣಿ) ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. 1 ರಿಂದ 5 ನೇ ತರಗತಿವರೆಗೆ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ನಡೆಸತಕ್ಕದ್ದು.
2. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ,ವರ್ಗೀಕರಣ)ನಿಯಮ-1997 ನಿಯಮ-3(5)(ಡಿ)ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
3. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಚಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು. ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
4. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-41(5) ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆ್ಯಕ್ಟ್ ಸಂಖ್ಯೆ:1:95) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
8. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 95, ದಿನಾಂಕ : 07-09-98 ಮತ್ತು ದಿನಾಂಕ : 29-12-98 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. (Permanently without-aid)
9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ ಅವುಗಳಿಗೆ ಬದ್ಧವಾಗಿರತಕ್ಕದ್ದು.
10. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಬೋಧಿಸತಕ್ಕದ್ದು ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995. ದಿನಾಂಕ:- 04-10-96ರ ನಿಯಮ-10ರಂತೆ ಟರ್ಮ್ ಶುಲ್ಕ, ಬೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

Scanned with OKEN Scanner

11. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.39. ವಿವಿಧ-99. ದಿನಾಂಕ:14-03-2000ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯೂಲೇಷನ್ ಆಫ್ ಸರ್ಟನ್ ಫೀಸ್ ಅಂಡ್ ಡೊನೇಶನ್) ನಿಯಮ-1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ಯಾವುದೇ ವಂತಿಗೆಯನ್ನು ವಸೂಲು ಮಾಡುವಂತಿಲ್ಲ.

12. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು, ದಿನಾಂಕ : 04-11-99 ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ : 19-05-99 ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

13. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.52ವಿವಿದ.99 ದಿನಾಂಕ:-02-02-2000ರ ಅನೆಕ್ಷರ್-5ರ ನಿಯಮದಂತೆ ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

15. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ, ಆಟದ ಮೈದಾನ ಶಾಲಾ ಕಟ್ಟಡಗಳನ್ನು ಮೂರು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.

16. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

18. 7ನೇ ತರಗತಿಯನ್ನು ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ಪ್ರಾರಂಭಿಸತಕ್ಕದ್ದು.

19. ಈಗಾಗಲೇ 1 ರಿಂದ 7ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

20. ಸರ್ಕಾರದ ಸುತ್ತೋಲೆ ಸಂಖ್ಯೆಇಡಿ 27 ಎಸ್‌ಇಪಿ 03 ದಿನಾಂಕ:-13-02-2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಸಿಬ್ಬಂದಿಗಳ ಸೇವಾ ಪುಸ್ತಕವನ್ನು ತೆರೆದು, ಅದರಲ್ಲಿ ಶಿಕ್ಷಕರ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

21. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.

22. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.

23. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50 ಕ್ಕೆ ಮೀರಬಾರದು.

24. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

25. ಸರ್ಕಾರದ ಪತ್ರದ ಸಂಖ್ಯೆ:ಇಡಿ:122;ಎಸ್.ಇ.ಎಸ್.2007 ಬೆಂಗಳೂರು ದಿನಾಂಕ:17.05.2007 ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

ಉಪನಿರ್ದೇಶಕರು ಈ ಕೆಳಕಂಡ ಮಾಹಿತಿಗಳನ್ನು ಪರಿಶೀಲಿಸಬೇಕಾಗಿ ತಿಳಿಸಿದೆ.

1. ಸಂಸ್ಥೆಯ ಹೆಸರಿನಲ್ಲಿ ರೂ.5.00 ಲಕ್ಷಗಳ ಬ್ಯಾಂಕ್ ಬ್ಯಾಲೆನ್ಸ್ ಅಥವಾ ಸ್ಥಿರಾಸ್ತಿ ಇರುವ ಬಗ್ಗೆ ಮಾಹಿತಿ.
2. ಶಾಲೆಯ ಇತ್ತೀಚಿನ ಮಾನ್ಯತೆ ನವೀಕರಣದ ದಾಖಲೆ.
3. ಅನುಮತಿ ಪಡೆದ ಮಾಧ್ಯದಲ್ಲೇ ಶಾಲೆ ನಡೆಸುತ್ತಿರುವ ಬಗ್ಗೆ ನೋಟರೀರವರಿಂದ ದೃಢೀಕೃತ ಪ್ರಮಾಣ ಪತ್ರ.
4. ಸದರಿ ಶಾಲೆ ಭಾಷಾ ನೀತಿ ಉಲ್ಲಂಘಿಸಿಲ್ಲ ಎಂಬ ಬಗ್ಗೆ ದೃಢೀಕರಣ.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

ಸ್ಥಳ : ಬೆಂಗಳೂರು
ದಿನಾಂಕ : 02.06.2011

ನಿರ್ದೇಶಕರು.
(ಪ್ರಾಥಮಿಕ ಶಿಕ್ಷಣ)

ಪ್ರತಿಯನ್ನು.

1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕೊಡಗು ಜಿಲ್ಲೆ
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಸೋಮವಾರಪೇಟೆ, ತಾ.ಕೊಡಗು ಜಿಲ್ಲೆ ಇವರಿಗೆ ಸೂಕ್ತ ಕ್ರಮಕ್ಕಾಗಿ
3. ಕಾರ್ಯದರ್ಶಿಗಳು, ವಿಶ್ವಮಾನವ ಕುವೆಂಪು ವಿದ್ಯಾ ಸಂಸ್ಥೆ (ರಿ). ಸೋಮವಾರ ಪೇಟೆ ತಾಲ್ಲೂಕು, ಕೊಡಗು ಜಿಲ್ಲೆ
4. ಕಛೇರಿ ಪ್ರತಿ.

Scanned with OKEN Scanner

ಕೊಡಗು ಜಿಲ್ಲಾ ಪಂಚಾಯತ್ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ಮಡಿಕೇರಿ

ಸಂ:ಪಿ2:8ನೇ ತರ ಪ್ರಾರಂ ಅನು:33/2013-14 ದಿನಾಂಕ:20.12.2013

ಜ್ಞಾಪನಾ

******

ವಿಷಯ:-ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ-2009 ರಂತೆ 8ನೇ ತರಗತಿಯನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:-1)ಮಾನ್ಯ ಆಯುಕ್ತರು ಸಾಶಿಇಲಾಖೆ ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಸಿ7(2) ಪ್ರಾಶಿಅಪೋಶಾಅಸು-01/2011-12 ದಿನಾಂಕ:24.04.13

2) ಕ್ಷೇತ್ರ ಶಿಕ್ಷಣಾಧಿಕಾರಿ ಸೋಮವಾರಪೇಟೆ ಇವರ ಪತ್ರ ಸಂ.ಎ1 ಅನು 8ನೇ ತರಗತಿ ಆಂಮಾ/61/2013-14ದಿನಾಂಕ 10.06.13,16.07.13,15.10.13&10.12.13.

********

ಉಲ್ಲೇಖ 1 ರ ಸುತ್ತೋಲೆಯ ಪ್ರಕಾರ ಮಾನ್ಯ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರು ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ-2009 ರಂತೆ ನಡೆಯುತ್ತಿರುವ ಖಾಸಗಿ ಅನುದಾನರಹಿತ ಪ್ರಾಥಮಿಕ ಶಾಲೆಗಳಲ್ಲಿ ಈಗಾಗಲೇ 1 ರಿಂದ 7ನೇ ತರಗತಿಗಳು ನಡೆಯುತ್ತಿದ್ದಲ್ಲಿ ಮತ್ತು ಶಾಲೆಯ ಆಡಳಿತ ಮಂಡಳಿಯವರು 8ನೇ ತರಗತಿಯನ್ನು ಪ್ರಾರಂಭಿಸಲು ಇಚ್ಛಿಸಿದ್ದಲ್ಲಿ ಈ ಬಗ್ಗೆ ಶಾಲೆಯು ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವ ಹಾಗೂ ಅಗತ್ಯ ತರಬೇತಿ ಹೊಂದಿದ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಂಡಿರುವುದನ್ನು ಖಚಿತ ಪಡಿಸಿಕೊಂಡ ನಂತರವೇ ಅನುಮತಿಯನ್ನು ನೀಡಲು ತಿಳಿಸಲ್ಪಟ್ಟಿರುತ್ತದೆ.

ಈ ಬಗ್ಗೆ ಉಲ್ಲೇಖ 2 ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೋಮವಾರಪೇಟೆ ಇವರು ವಿಶ್ವ ಮಾನವ ಕುವೆಂಪು ಹಿರಿಯ ಪ್ರಾಥಮಿಕ ಶಾಲೆ ಸೋಮವಾರಪೇಟೆ ಇವರು ಈ ಶಾಲೆಯಲ್ಲಿ 2013-14ನೇ ಸಾಲಿನಿಂದ 8ನೇ ತರಗತಿಯನ್ನು ಆಂಗ್ಲ ಮಾಧ್ಯಮದಲ್ಲಿ ಪ್ರಾರಂಭಿಸಲು ಆಡಳಿತ ಮಂಡಳಿಯವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಶಾಲೆಯ ಮೂಲಭೂತ ಸೌಲಭ್ಯ ಹಾಗೂ ತರಬೇತಿ ಹೊಂದಿದ ಶಿಕ್ಷಕರುಗಳನ್ನು ನೇಮಕ ಮಾಡಿಕೊಂಡಿರುವ ಬಗ್ಗೆ ಶಾಲಾ ಭೇಟಿ ವರದಿಯೊಂದಿಗೆ ಅನುಮತಿ ನೀಡುವ ಸಲುವಾಗಿ ಪ್ರಸ್ತಾವನೆಯನ್ನು ಈ ಕಚೇರಿಗೆ ಸಲ್ಲಿಸಿರುತ್ತಾರೆ. ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೋಮವಾರಪೇಟೆ ಇವರು ನೀಡಿರುವ ವರದಿಯನ್ನು ಪರಿಶೀಲಿಸಿ ಅವರ ವರದಿಯಂತೆ ಶಾಲೆಯು ಅಗತ್ಯ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಹಾಗೂ ತರಬೇತಿ ಹೊಂದಿರುವ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಷರತ್ತಿನ ಮೇಲೆ 8ನೇ ತರಗತಿಯನ್ನು ಆಂಗ್ಲ ಮಾಧ್ಯಮದಲ್ಲಿ 2013-14ನೇ ಸಾಲಿನಿಂದ ಪ್ರಾರಂಭಿಸಲು ಈ ಮೂಲಕ ಅನುಮತಿ ನೀಡಿದೆ. ಈ ಬಗ್ಗೆ 8ನೇ ತರಗತಿಗೆ ಸಂಬಂಧ ಪಟ್ಟಂತೆ ದಾಖಲಾತಿ ವಹಿ, ವಿದ್ಯಾರ್ಥಿಗಳ ಅಂಕ ಪಟ್ಟಿ ಹಾಗೂ ಇನ್ನಿತರ ವಹಿಗಳನ್ನು ಪ್ರತ್ಯೇಕವಾಗಿ ನಿರ್ವಹಿಸುವುದು ಮತ್ತು ಇಲಾಖೆಯು ಕಾಲಕಾಲಕ್ಕೆ ಹೊರಡಿಸುವ ಸೂಚನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸಲು ಈ ಮೂಲಕ ತಿಳಿಸಿದೆ. ತಪ್ಪಿದಲ್ಲಿ ಈಗಾಗಲೆ ನೀಡಿರುವ ಅನುಮತಿಯನ್ನು ರದ್ದು ಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಉಪನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ ಮಡಿಕೇರಿ
ಕೊಡಗು ಜಿಲ್ಲೆ.

ಗೆ,

ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸೋಮವಾರಪೇಟೆ

ಪ್ರತಿಯನ್ನು-ಭಾತ್ಮಿದಾರರು ವಿಶ್ವಮಾನವ ಕುವೆಂಪು ಹಿ.ಪ್ರಾ.ಶಾಲೆ, ಸೋಮವಾರಪೇಟೆ ಇವರಿಗೆ.

23/12/2013

Scanned with OKEN Scanner

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ: ಸಿ8[7] ಶಾಶಿಅ ಹೊಪ್ರೌಶಾ/ನೋ/76//2013-14 ದಿನಾಂಕ:10.02.2014

## ನಮೂನೆ-2

### [ನಿಯಮ 3 ಉಪನಿಯಮ 5(ಬಿ)]

### ಪ್ರಮಾಣ ಪತ್ರ ಸಂಖ್ಯೆ:20/2014-15

**ವಿಶ್ವ ಮಾನವ ಕುವೆಂಪು ವಿದ್ಯಾ ಸಂಸ್ಥೆ,ಸೋಮವಾರಪೇಟೆ, ಕೊಡಗು ಜಿಲ್ಲೆ,** ಇವರ ಗವರ್ನಿಗ್ ಕೌನ್ಸಿಲ್‌ನ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರೌಢ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ-1983 ಕರ್ನಾಟಕ ಆಕ್ಟ್ 1995] ಸೆಕ್ಷನ್-31 ರಂತೆ **2014-15ನೇ** ಸಾಲಿನಿಂದ ಹೊಸ ಪ್ರೌಢಶಾಲೆ ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | | |
|---|---|---|---|
| *01* | ಕ್ರಮ ಸಂಖ್ಯೆ | : | **20/2014-15** |
| *02.* | ಶಾಲೆಯ ಹೆಸರು ಮತ್ತು ವಿಳಾಸ | : | **ವಿಶ್ವ ಮಾನವ ಕುವೆಂಪು ಪ್ರೌಢ ಶಾಲೆ,ಸೋಮವಾರಪೇಟೆ, ಕೊಡಗು ಜಿಲ್ಲೆ.** |
| *03.* | ಅನುಮತಿ ನೀಡಿದ ತರಗತಿ | : | **9ನೇ ತರಗತಿ, 10ನೇ ತರಗತಿ.** |
| *04.* | ಪ್ರಾರಂಭಿಸಬೇಕಾದ ತರಗತಿಗಳು | : | **9ನೇ ತರಗತಿ, 10ನೇ ತರಗತಿ.** |
| *05.* | ಶೈಕ್ಷಣಿಕ ವರ್ಷ | : | **2014-15 2015-16** |
| *06.* | ಅನುಮತಿ ನೀಡಿದ ಮಾಧ್ಯಮ | : | **ಆಂಗ್ಲ ಮಾಧ್ಯಮ [ಶಾಶ್ವತ ಅನುದಾನ ರಹಿತ]** |
| *07.* | ಶುಲ್ಕ ಪಾವತಿ ಮಾಡಿರುವುದು | : | **D.D. No: 502811, Date:28.10.2013, Rs. 10,000/-** |

ಸದರಿ ಶಿಕ್ಷಣ ಸಂಸ್ಥೆಯನ್ನು **ಕ್ರಮ ಸಂ: 20/2014-15, ಪುಟ ಸಂ:186, ವಾಲ್ಯೂಂ ಸಂ:09ರಲ್ಲಿ** ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

1. 9 ಮತ್ತು 10ನೇ ತರಗತಿಗಳಲ್ಲಿ ನಿಯಮದಂತೆ ಕನಿಷ್ಠ ವಿದ್ಯಾರ್ಥಿಗಳು ದಾಖಲಾಗುವುದನ್ನು ಉಪನಿರ್ದೇಶಕರು ಖಚಿತ ಪಡಿಸಿಕೊಂಡು ಡಿಸೆಂಬರ್ 31ರ ಒಳಗಾಗಿ ಪ್ರಥಮ ಮಾನ್ಯತೆ/ನೋಂದಣಿ ನೀಡತಕ್ಕದ್ದು.
2. ಈ ನೊಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
3. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
4. ಶಾಲಾ ನಿವೇಶನ, ಸಂಸ್ಥೆಯ ಹೆಸರಿನಲ್ಲಿರಬೇಕು. ಕಟ್ಟಡ, ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು ಇಲ್ಲದಿದ್ದಲ್ಲಿ ನೊಂದಣಿಯನ್ನು ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ನೊಂದಣಿಯನ್ನು ರದ್ದುಗೊಳಿಸಲಾಗುವುದು
5. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
6. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
7. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
8. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ

Scanned with OKEN Scanner

Mr. Babu
e.p.o office. 9980327154

ಮಸೂದೆ 1983ರ ಅಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

9. ಈ ಪ್ರೌಢಶಾಲಾ ನೊಂದಾವಣಿಯಂತೆ ಸರ್ಕಾರಿ ಅಧಿಸೂಚನೆ ಸಂ:ಇಡಿ:175:ಪಿಎಂಸಿ:95, ದಿ:07.09.1998 ಮತ್ತು ದಿ:29.12.1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10/– ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
10. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ವಯ ಸರ್ಕಾರದ ಅಧಿಸೂಚನೆ ದಿನಾಂಕ:27.12.2007ರ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸುವುದು.
11. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.
12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.
13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
14. ಆಡಳಿತ ಮಂಡಳಿ ಕರ್ನಾಟಕ ಶಿಕ್ಷಣ ಮಸೂದೆ 1983 ನಿಯಮ–36ರಂತೆ ಪ್ರಥಮ ಮಾನ್ಯತೆ/ನೋದಣಿ ಪ್ರಸ್ತಾವನೆ ಶೈಕ್ಷಣಿಕ ವರ್ಷ ಪ್ರಾರಂಭವಾದ ಮೂರು ತಿಂಗಳ ಒಳಗಾಗಿ ಪ್ರಸ್ತಾವನೆ ಸಲ್ಲಿಸಿ ಪ್ರಥಮ ಮಾನ್ಯತೆ/ನೋದಣಿಯನ್ನು ಪಡೆಯತಕ್ಕದ್ದು, ತಪ್ಪಿದ್ದಲ್ಲಿ ಈ ಅನುಮತಿ ತನ್ನತಾನಗಿಯೇ ರದ್ದಾಗುವುದು.
15. ಶಾಲ' ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.
16. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
17. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
18. ಶಾಲ'ಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು..
19. ಶಾಲೆಯ ಕಟ್ಟಡ ಸುರಕ್ಷತೆ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಸಂಬಂದಿಸಿದ ಅಗ್ನಿ ಶಾಮಕ ಇಲಾಖೆಯಿಂದ ಕಟ್ಟಡದ ಸುರಕ್ಷತೆ ಬಗ್ಗೆ ಖಚಿತ ಪಡಿಸಿಕಳ್ಳುವ ಷರತ್ತಿಗೊಳಪಟ್ಟಿರುತ್ತದೆ.
20. ಶಾಲಾ ಕಟ್ಟಡವನ್ನು ಸಂಸ್ಥೆಯ ಹೆಸರಿಗೆ ನೊಂದಣಿ ಮಾಡಿಸುವ ಷರತ್ತಿಗೊಳಪಟ್ಟಿರುತ್ತದೆ.
21. ಶಾಲಾ ಆವರಣದ 200 ಮೀ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಫಲಕವನ್ನು ಹಾಕುವುದು.
22. ಶಾಲಾ ಆಡಳಿತ ಮಂಡಳಿಯು ಯಾವುದೇ ತಪ್ಪು ಮಾಹಿತಿಯನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

ಆಯುಕ್ತರು
ಹಾಗೂ ನೋಂದಣಿ ಅಧಿಕಾರಿ,
ಸಾರ್ವಜನಿಕ ಶಿಕ್ಷಣ ಇಲಾಖೆ

**ಇವರಿಗೆ:**

1. ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಕೊಡಗು ಜಿಲ್ಲೆ, ಮಡಿಕೇರಿ.
2. ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಸೋಮವಾರಪೇಟೆ,ಕೊಡಗು ಜಿಲ್ಲೆ.
3. ಕಾರ್ಯದರ್ಶಿಗಳು,ವಿಶ್ವಮಾನವ ಕುವೆಂಪು ವಿದ್ಯಾ ಸಂಸ್ಥೆ ಒಕ್ಕಲಿಗರ ಸಂಘ,ಸೋಮವಾರಪೇಟೆ ತಾ: ಕೊಡಗು ಜಿಲ್ಲೆ.
4. ಕಛೇರಿ ಪ್ರತಿ. \\typing3server\e\e\est2\babu\new scl-2014-15.docx

Scanned with OKEN Scanner